ಮೈಸೂರು : ಮೈಸೂರು ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗ ಹಾಗೂ ಸ್ನಾತಕೋತ್ತರ ಕ್ರೀಡಾ ಮಂಡಳಿ ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ಮೈಸೂರು ವಿವಿ ಅಂತರ ಕಾಲೇಜು– ಅಂತರವಲಯ ಮಹಿಳೆಯರ ಟೇಬಲ್ ಟೆನ್ನಿಸ್ ಸ್ಪರ್ಧೆಯಲ್ಲಿ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ವಿದ್ಯಾರ್ಥಿನಿಯರ ತಂಡ ಕಂಚಿನ ಪದಕ ಪಡೆದುಕೊಂಡಿದೆ.

ಫೆ.24ರಿಂದ 26ರವರೆಗೆ ಮೈಸೂರು ವಿವಿ ಸ್ಪೋರ್ಟ್ಸ್ ಪೆವಿಲಿಯನ್‌ನಲ್ಲಿ ನಡೆದ ಟೇಬಲ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಕಾಲೇಜಿನ ವಿದ್ಯಾರ್ಥಿನಿಯರಾದ ಗೀತಾ ಪಿ., ಮಾನಸ ಆರ್, ಮೇಘನ ಸಿ.ಡಿ., ಕೋಮಲ ಎಸ್. ಭಾಗವಹಿಸಿದ್ದರು. ದೈಹಿಕ ಶಿಕ್ಷಣ ನಿರ್ದೇಶಕರಾದ ಪ್ರೊ.ಜಯರಾಮು ತಂಡದ ನೇತೃತ್ವ ವಹಿಸಿದ್ದರು. ಈ ಪಂದ್ಯಾವಳಿಯಲ್ಲಿ ಪಾಲ್ಗೊಂಡು ಕಂಚಿನ ಪದಕ ಗೆಲ್ಲುವ ಮೂಲಕ ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿನಿಯರ ತಂಡ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರನ್ನು ಪ್ರಾಂಶುಪಾಲರಾದ ಪ್ರೊ.ಎಂ.ಶಿವಣ್ಣ ಅಭಿನಂದಿಸಿದ್ದಾರೆ.

